**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಡಿ.ಎಸ್. ಅರುಣ್, ಡಾ. ಧನಂಜಯ ಸರ್ಜಿ, ಶ್ರೀ ಡಿ.ಟಿ. ಶ್ರೀನಿವಾಸ್, ಶ್ರೀ ಕೆ.ಎಸ್. ನವೀನ್, ಶ್ರೀ ಮಧು ಜಿ ಮಾದೇಗೌಡ, ಶ್ರೀ ಆರ್ ರಘು ಪಾಟೀಲ, ಮತ್ತು ಶ್ರೀ ಕಿಶೋರ್ ಕುಮಾರ್ ಪುತ್ತೂರು ರವರುಗಳು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಉತ್ತರ**

**ಸೂಚನೆ:**

ನಗರಾಭಿವೃದ್ಧಿ ಇಲಾಖೆಯಿಂದ ಹಂಚಿಕೆ ಮಾಡುವ ಸಿ.ಎ. ನಿವೇಶನಗಳಿಗಾಗಿ ಸಾರ್ವಜನಿಕರು ತೋರುವ ನಿರಾಸಕ್ತಿ ಸಿ.ಎ. ನಿವೇಶನಗಳ ಗುತ್ತಿಗೆಯನ್ನು ವಿಸ್ತರಿಸುವ ಸಂದರ್ಭದಲ್ಲಿ ಸರ್ಕಾರ ಅನುಸರಿಸುತ್ತಿರುವ ನೀತಿಯಲ್ಲಿನ ಗೊಂದಲಗಳ ಬಗ್ಗೆ ನಿಯಮ-330 ರ ಅಡಿಯಲ್ಲಿ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು 1991ರ ನಿಯಮ 8(1) ರಲ್ಲಿ ಮತ್ತು ಕರ್ನಾಟಕ ಯೋಜನಾ ಪ್ರಾಧಿಕಾರಗಳ (ನಾಗರೀಕ ಸೌಕರ್ಯ ನಿವೇಶನಗಳ ಹಂಚಿಕೆ) 2016 ನಿಯಮ 13(1) ರನ್ವಯ ನಾಗರಿಕ ಸೌಲಭ್ಯ ನಿವೇಶನಗಳ ಗುತ್ತಿಗೆ ಹಣವನ್ನು ನಿಗದಿಪಡಿಸಿ ನಾಗರೀಕ ಸೌಲಭ್ಯ ನಿವೇಶನಗಳನ್ನು ಹಂಚಿಕೆ ಮಾಡಲಾಗುತ್ತಿದೆ.

ನಾಗರೀಕ ಸೌಲಭ್ಯ ನಿವೇಶನಗಳನ್ನು ಹಂಚಿಕೆ ಮಾಡಲು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು 1991ರ ನಿಯಮ 7 ಉಪ ನಿಯಮ (3) ರನ್ವಯ "ನಾಗರಿಕ ಸೌಲಭ್ಯಗಳುಳ್ಳ ನಿವೇಶನಗಳ ಹಂಚಿಕೆಯ ಸಮಿತಿ"ಯನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ಸದರಿ ಸಮಿತಿಯು ನಿಯಮ 7(1) ರಲ್ಲಿನ ಅಂಶಗಳೊಂದಿಗೆ ಪರಿಶೀಲಿಸಿ ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ ಮಾಡಲು ಸಮಿತಿಯು ತೀರ್ಮಾನ ಕೈಗೊಳ್ಳುತ್ತದೆ. ಸದರಿ ತೀರ್ಮಾನವು ಪ್ರಾಧಿಕಾರದ ಅನುಮೋದನೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು-1991 ನಿಯಮ-8(1)ರ ರೀತ್ಯಾ ಉಪನೋಂಧಣಾಧಿಕಾರಿಗಳ ಮಾರ್ಗಸೂಚಿ ಬೆಲೆಯನ್ನು ಅನುಸರಿಸಿ ಗುತ್ತಿಗೆ ಮೊತ್ತದ ದರವನ್ನು ನಿಗಧಿಪಡಿಸಬೇಕಾಗುತ್ತದೆ. ಅದರಂತೆ ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರಗಳು ಮತ್ತು ನಗರ ಯೋಜನಾ ಪ್ರಾಧಿಕಾರಗಳು ನಾಗರೀಕ ಸೌಕರ್ಯ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲೆ 30 ವರ್ಷಗಳ ಅವಧಿಗೆ ನೀಡಲಾಗುತ್ತಿದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು-1991 8(1) ರಂತೆ ಗುತ್ತಿಗೆ ಮೌಲ್ಯದ ಹೆಚ್ಚುವರಿ ಶೇ.50 ರಂತೆ ಗುತ್ತಿಗೆ ಮೌಲ್ಯವನ್ನು ನಿಗಧಿಪಡಿಸಿ ನಿಯಮ-10 (14)ರನ್ವಯ ಸಿ.ಎ ನಿವೇಶನಗಳ ನವೀಕರಣವನ್ನು ಸರ್ಕಾರದ ಪೂರ್ವಾನುಮೋದನೆಯನ್ನು ಪಡೆದು ಮುಂದಿನ 30 ವರ್ಷಗಳ ಅವಧಿಗೆ ಗುತ್ತಿಗೆ ಅವಧಿಯನ್ನು ವಿಸ್ತರಿಸಲಾಗುತ್ತದೆ.

ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು, 1991 ರ ನಿಯಮ 8(4) ರಂತೆ ಹಾಗೂ ಯೋಜನಾ ಪ್ರಾಧಿಕಾರಗಳು (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು, 2016 ರ ನಿಯಮ 13(4) ರಂತೆ ವಿಕಲಚೇತನರು ಹಾಗೂ ಬುದ್ಧಿಮಾಂದ್ಯರ ಕಲ್ಯಾಣಕ್ಕಾಗಿ ಸ್ಥಾಪಿಸಲಾಗಿರುವ ಸಂಸ್ಥೆಗಳು, ಕೇವಲ ಕನ್ನಡ ಮಾಧ್ಯಮದಲ್ಲಿ ಶಾಲೆಯನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳು, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ವರ್ಗದ ಸಂಸ್ಥೆಗಳು ಮತ್ತು ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರಗಳ ಇಲಾಖೆಗಳು ಮತ್ತು ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದಿಂದ ಸ್ಥಾಪಿಸಲ್ಪಟ್ಟ ನಿಗಮ ಅಥವಾ ಯಾವುದೇ ಸಂಸ್ಥೆಗಳಿಗೆ ಪ್ರಾಧಿಕಾರವು ನಿಗಧಿಪಡಿಸಿದ ಗುತ್ತಿಗೆ ಹಣದ ಪೈಕಿ ಶೇ. 50 ರಷ್ಟರ ದರದಲ್ಲಿ ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ ಪ್ರಕ್ರಿಯೆಯು ಸಂಪೂರ್ಣ ಪಾರದರ್ಶಕವಾಗಿದ್ದು, ಒಂದಕ್ಕಿಂತ ಹೆಚ್ಚು ಅರ್ಜಿದಾರರಿದ್ದಲ್ಲಿ ಲಾಟರಿ ಮುಖಾಂತರ ಹಂಚಿಕೆ ಮಾಡುವ ವ್ಯವಸ್ಥೆ ಜಾರಿಯಲ್ಲಿದೆ. ಗುತ್ತಿಗೆ ನವೀಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು, 1991 ಮತ್ತು ಕರ್ನಾಟಕ ಯೋಜನಾ ಪ್ರಾಧಿಕಾರಗಳ (ನಾಗರಿಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು, 2016 ರಲ್ಲಿ ಗುತ್ತಿಗೆಯನ್ನು ನವೀಕರಿಸಲು ಸ್ಪಷ್ಟ ಅವಕಾಶವಿರುತ್ತದೆ. ಆದುದರಿಂದ, ಈ ವಿಷಯದಲ್ಲಿ ಯಾವುದೇ ಗೊಂದಲಗಳಿಗೆ ಆಸ್ಪದವಿರುವುದಿಲ್ಲ.

**ಸಂಖ್ಯೆ: ನಅಇ 277 ಬೆಂರೂಪ್ರಾ 2026**

(ಡಾ. ಯತೀಂದ್ರ ಸಿದ್ದರಾಮಯ್ಯ)
ನಗರಾಭಿವೃದ್ಧಿ ಸಚಿವರು